ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು, ಕಲ್ಪಿಸಬೇಕಾಗಿರುವ ತಾಂಡಾಗಳ ಸಂಖ್ಯೆ ಎಷ್ಟು ?

ಅ) ಪರಿಶಿಷ್ಟ ಜಾತಿ ವರ್ಗದವರಿಗೆ ವಿದ್ಯುತ್ ಸಂಪರ್ಕ ಸೌಲಭ್ಯ ಒದಗಿಸಿದ ಬಸದಿಗಳು ಎಷ್ಟು

ಶ್ರೀ ಜೆ.ಹೆಚ್. ಪಟೀಲ್ (ಉಪ ಮುಖ್ಯಮಂತ್ರಿಗಳು) :

ಅ) ಕಮಲಾಪುರ ಮತ ಕ್ಷೇತ್ರದಲ್ಲಿ ಒಟ್ಟು 54 ತಾಂಡಾಗಳಿದ್ದು, ಇವುಗಳ ಪೈಕಿ 50 ತಾಂಡಾಗಳಿಗೆ ಈಗಾಗಲೇ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದ್ದು 4 ತಾಂಡಾಗಳು ವಿದ್ಯುದ್ದೀಕರಣಕ್ಕಾಗಿ ಬಾಕಿ ಉಳಿದಿವೆ ಈ 4 ತಾಂಡಾಗಳ ಪೈಕಿ 2 ತಾಂಡಾಗಳಿಗೆ ಮಾರ್ಚ್ 96ರ ಅಂತ್ಯದ ವೇಳೆಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಂಡಿದ್ದು, ಉಳಿದ 2 ತಾಂಡಾಗಳನ್ನು ಗ್ರಾಮೀಣ ವಿದ್ಯುದ್ದೀಕರಣ ನಿಗಮದ ಯೋಜನೆಯಡಿಯಲ್ಲಿ ವಿದ್ಯುದ್ದೀಕರಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಜನವರಿ 96ರ ಅಂತ್ಯದವರೆಗೆ ಈ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 105 ಹರಿಜನ ಬಸ್ತಿಗಳಿಗೆ ವಿದ್ಯುತ್ ಸೌಲಭ್ಯ ಒದಗಿಸಲಾಗಿದೆ.

ಲೋಕೋಪಯೋಗಿ ರಸ್ತೆಗಳ ದುರಸ್ತಿ

698 - ಶ್ರೀ ಎಸ್. ರಾಜೇಂದ್ರನ್ (ಕೆ.ಜಿ.ಎಫ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಲೋಕೋಪಯೋಗಿ ರಸ್ತೆಗಳೆಂದೇ ಗುರುತಿಸಿ ಅವುಗಳ ದುರಸ್ತಿಗಾಗಿ ಸರ್ಕಾರ ಕಾದಿರಿಸಿರುವ ಹಣವನ್ನು ಕ್ಷೇತ್ರದ ಇತರೆ ರಸ್ತೆಗಳ ದುರಸ್ತಿಗಾಗಿ ಬಳಸಲು ಸರ್ಕಾರ ಅನುಮತಿ ನೀಡುವುದೆ?

ಆ) ಈ ಕಾರ್ಯಕ್ಕಾಗಿ ಶಾಸಕರ ಹೆಸರಿನಲ್ಲಿ 30 ಲಕ್ಷಗಳನ್ನು ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ನಿಗದಿಪಡಿಸಿ ಕಾದಿಸಲಾಗಿದೆಯೇ?

ಇ) ಕಾದಿರಿಸಿದ್ದರೆ ಆ ಹಣವನ್ನು ಲೋಕೋಪಯೋಗಿ ರಸ್ತೆಗಳ ಜೊತೆಗೆ ಇತರೆ ರಸ್ತೆಗಳ ದುರಸ್ತಿಗೂ ಕೂಡ ಬಳಸಲು ಶಾಸಕರುಗಳಿಗೆ ಅಧಿಕಾರ ನೀಡುವುದೆ?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಇಲ್ಲ

ಆ) ಪ್ರತಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆ ರಸ್ತೆಗಳನ್ನು ಮಾತ್ರ 30 ಲಕ್ಷ ರೂ.ಗಳ ಅಂದಾಜಿನಲ್ಲಿ ಅಭಿವೃದ್ಧಿ ಪಡಿಸುವ ಯೋಜನೆ ಇದಾಗಿದ್ದು, ಅಗತ್ಯಕ್ಕೆ ತಕ್ಕಂತೆ ರಸ್ತೆಗಳನ್ನು ಗುರುತು ಪಡಿಸುವ ಬಗ್ಗೆ ಶಾಸಕರ ಅಭಿಪ್ರಾಯವನ್ನು ಪಡೆಯಲಾಗುತ್ತದೆ. ಅವರ ಹೆಸರಿನಲ್ಲಿ ಹಣವನ್ನು ಕಾಯ್ದಿರಿಸುವ ಪ್ರಸ್ತಾಪವಿರುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಪಶುವೈದ್ಯ ವಿಶ್ವ ವಿದ್ಯಾಲಯಗಳು

703 - ಶ್ರೀ ಎಸ್. ಶಿವಣ್ಣ (ತುಮಕೂರು) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶುವೈದ್ಯ ವಿಶ್ವವಿದ್ಯಾಲಯ ಸ್ಥಾಪಿಸುವ ಯೋಜನೆ ಸರ್ಕಾರದ ಗಮನದಲ್ಲಿದೆಯೇ?

ಆ) ಹಾಗಿದ್ದಲ್ಲಿ ಅದನ್ನು ಯಾವಾಗ ಮತ್ತು ಎಲ್ಲಿ ಪ್ರಾರಂಭ ಮಾಡಲಾಗುವುದು?

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) :